# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☏: 0816-2255650,2273511 ಫ್ಯಾಕ್ಸ್ : 0816-2270719

ಸಂಖ್ಯೆ:ತು.ವಿ.:ಪ.ವಿ.:ವಿ.ನಿ.-02:616/2026-27 ದಿನಾಂಕ: 18.09.2026

## : ಅಧಿಸೂಚನೆ :

**ವಿಷಯ : 2026ರ ಜುಲೈ ಮಾಹೆಯಲ್ಲಿ ನಡೆದ ವಿವಿಧ ಸ್ನಾತಕೋತ್ತರ ಪದವಿಯ ದ್ವಿತೀಯ & ನಾಲ್ಕನೇ ಸೆಮಿಸ್ಟರ್ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಕುರಿತು.**

ಉಲ್ಲೇಖ : ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:15.09.2026

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅಧಿಸೂಚನೆಯಲ್ಲಿ 2026 ರ ಜುಲೈ ಮಾಹೆಯಲ್ಲಿ ನಡೆದ ಸ್ನಾತಕೋತ್ತರ ಪದವಿಯ **ದ್ವಿತೀಯ & ನಾಲ್ಕನೇ** ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಈಗಾಗಲೇ ಫಲಿತಾಂಶ ಪ್ರಕಟಿಸಿದ ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಛಾಲೆಂಜ್ ಮೌಲ್ಯಮಾಪನಕ್ಕೆ ಯು.ಯು.ಸಿ.ಎಂ.ಎಸ್ ತಂತ್ರಾಂಶದ ಮುಖಾಂತರ ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿಗಳು ಸಂಬಂಧಪಟ್ಟ ವಿಭಾಗಗಳಲ್ಲಿ/ಕಾಲೇಜುಗಳಲ್ಲಿ ವಿಭಾಗದ ಮುಖ್ಯಸ್ಥರು/ಪ್ರಾಂಶುಪಾಲರ ಮುಖಾಂತರ **ಯು.ಯು.ಸಿ.ಎಂ.ಎಸ್** ತಂತ್ರಾಂಶದ ಮುಖಾಂತರ ವಿದ್ಯಾರ್ಥಿಗಳ ಲಾಗಿನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಸದರಿ ಪ್ರತಿಯನ್ನು ವಿಭಾಗ/ ಕಾಲೇಜಿಗೆ ಸಲ್ಲಿಸುವುದು. **ಸದರಿ ಮಾಹಿತಿಯನ್ನು ಈ ಕೆಳಗೆ ನೀಡಿದ ದಿನಾಂಕದೊಳಗೆ ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಕಡ್ಡಾಯವಾಗಿ ಸಲ್ಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.**

| | |
|---|---|
| **ಛಾಲೆಂಜ್ ಮೌಲ್ಯಮಾಪನದ ಶುಲ್ಕ ಪ್ರತಿ ವಿಷಯಕ್ಕೆ (Per Paper)** | **ರೂ.1,310-00** |
| ವಿದ್ಯಾರ್ಥಿಗಳು ಛಾಲೆಂಜ್ ಮೌಲ್ಯಮಾಪನಕ್ಕೆ ಯು.ಯು.ಸಿ.ಎಂ.ಎಸ್ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ: | **30.09.2026** |
| ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ವಿಭಾಗ/ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕಡೆಯ ದಿನಾಂಕ: | **01.10.2026** |

**ವಿಶೇಷ ಸೂಚನೆ:-**

- ಎಲ್ಲಾ ವಿದ್ಯಾರ್ಥಿಗಳು ಯು.ಯು.ಸಿ.ಎಂ.ಎಸ್ ತಂತ್ರಾಂಶದ ಮುಖಾಂತರ ವಿದ್ಯಾರ್ಥಿಗಳ ಲಾಗಿನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಸದರಿ ಪ್ರತಿಯನ್ನು ವಿಭಾಗ/ಕಾಲೇಜುಗಳಿಗೆ ಸಲ್ಲಿಸುವುದು.
- **ವಿಶ್ವವಿದ್ಯಾನಿಲಯದ ಪರೀಕ್ಷಾ ಅಧಿಶಾಸನ-2021 ರನ್ವಯ ಛಾಲೆಂಜ್ ಮೌಲ್ಯಮಾಪನದಲ್ಲಿ ಪಡೆದ ಅಂಕಗಳೇ ಅಂತಿಮವಾಗಿರುತ್ತದೆ.**
- **ಕಡೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.**

**ಕುಲಸಚಿವರು(ಪರೀಕ್ಷಾಂಗ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

**ನಿರ್ದೇಶಕರು/ ಮುಖ್ಯಸ್ಥರು/ಸಂಯೋಜಕರು/ಪ್ರಾಂಶುಪಾಲರು/ವಿವಿಧ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. ಇಂದೇ ಅಂತರ್ಜಾಲದಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.